## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಟಿ.ಎಸ್.ಲೋಕೇಶ್, ಹಿಂದಿನ ಯೋಜನಾ ನಿರ್ದೇಶಕರು, ಜಿಲ್ಲಾ ಪಂಚಾಯತ್ ಬೆಳಗಾವಿ, ಇವರ ವಿರುದ್ಧದ ಇಲಾಖಾ ವಿಚಾರಣೆ- ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿ ರವರನ್ನು ನೇಮಕ ಮಾಡುವ ಬಗ್ಗೆ ಆದೇಶ.

ಓದಲಾಗಿದೆ:-1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ಬೆಳಗಾವಿ, ಇವರ ಪತ್ರಸಂಖ್ಯೆ:ಜಿಪಂ/ಸಿಬ್ಬಂದಿ/ವಿವ-178/2013-14/2254, ದಿನಾಂಕ: 19.09.2014

2. ಸರ್ಕಾರದ ಸಮ ಸಂಖ್ಯೆಯ ಕಾರಣ ಕೇಳುವ ನೋಟೀಸ್ ದಿನಾಂಕ: 23.01.2015

3. ಶ್ರೀ ಟಿ.ಎಸ್.ಲೋಕೇಶ್, ಹಿಂದಿನ ಯೋಜನಾ ನಿರ್ದೇಶಕರು, ಜಿಲ್ಲಾ ಪಂಚಾಯತ್ ಬೆಳಗಾವಿ, ರವರ ಲಿಖಿತ ರಕ್ಷಣಾ ಹೇಳಿಕೆ ದಿನಾಂಕ: 11.02.2015

****

ಪ್ರಸ್ತಾವನೆ:

ಬೆಳಗಾವಿ ಜಿಲ್ಲಾ ಪಂಚಾಯತ್‌ನಲ್ಲಿ ಈ ಹಿಂದೆ ಯೋಜನಾ ನಿರ್ದೇಶಕರು ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ, ಇಲಾಖಾ ಮುಖ್ಯಸ್ಥರ ಪೂರ್ವಾನುಮತಿ ಪಡೆಯದೆ ಹಾಗೂ ಹುದ್ದೆಯ ಪ್ರಭಾರವನ್ನು ಬೇರೆಯವರಿಗೆ ವಹಿಸದೇ ದಿನಾಂಕ: 17.05.2014 ರಿಂದ 17.08.2014ರ ವರೆವಿಗೂ ಅನಧಿಕೃತ ಗೈರು ಹಾಜರಾಗಿದ್ದ ಕಾರಣ, ಜಾರಿಮಾಡಲಾಗಿದ್ದ ಕಾರಣ ಕೇಳುವ ನೋಟಿಸುಗಳಿಗೆ ಸ್ಪಂದಿಸದೆ ಇದ್ದ ಕಾರಣ, ಜಿಲ್ಲಾ ಪಂಚಾಯತ್‌ನಿಂದ ಮಂಜೂರಾತಿ ಪಡೆಯದೇ ಸರ್ಕಾರಿ ವಾಹನ ಸಂಖ್ಯೆ: ಕೆಎ 22 ಜಿ-789ರ ದುರಸ್ತಿ ಮಾಡಿಸಿ ಸರ್ಕಾರದ ಹಣ ರೂ. 33,698/-ಗಳನ್ನು ದುರುಪಯೋಗ ಪಡಿಸಿಕೊಂಡಿದ್ದ, ಕಾರಣ, ಬೆಳಗಾವಿ ಜಿಲ್ಲಾ ಪಂಚಾಯತ್‌ನಿಂದ ನೀಡಲಾಗಿದ್ದ ಲ್ಯಾಪ್‌ಟಾಪ್‌ನ್ನು ಹಿಂದಿರುಗಿಸದೆ ಇದ್ದ ಕಾರಣ, ಹಾಗೂ ಇತರೆ ಆರೋಪಗಳಿಗೆ ಸಂಬಂಧಿಸಿದಂತೆ, ಬೆಳಗಾವಿ ಜಿಲ್ಲಾ ಪಂಚಾಯತ್‌ನ ಯೋಜನಾ ನಿರ್ದೇಶಕರ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಶ್ರೀ ಟಿ.ಎಸ್.ಲೋಕೇಶ್,(ಪ್ರಸ್ತುತ ಯೋಜನಾ ನಿರ್ದೇಶಕರು, ಜಿಲ್ಲಾ ಪಂಚಾಯತ್ ದಕ್ಷಿಣ ಕನ್ನಡ) ಇವರಿಗೆ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 11 ರನ್ವಯ ದೋಷಾರೋಪಣ ಪಟ್ಟಿಯೊಂದಿಗೆ ಕಾರಣ ಕೇಳುವ ನೋಟಿಸನ್ನು ಮೇಲೆ (2) ರಲ್ಲಿ ಓದಲಾದಂತೆ ಜಾರಿ ಮಾಡಲಾಗಿತ್ತು, ಇದಕ್ಕೆ ಅಧಿಕಾರಿಯು

ಮೇಲೆ ಓದಲಾದ(3) ರಲ್ಲಿ ಅವರ ಲಿಖಿತ ಹೇಳಿಕೆಯನ್ನು ಸಲ್ಲಿಸಿ, ಅವರ ವಿರುದ್ಧದ ಎಲ್ಲಾ ಆರೋಪಗಳನ್ನು ಅಲ್ಲಗಳೆಯುತ್ತಾ, ತಮ್ಮ ಮೇಲಿನ ಉದ್ದೇಶಿತ ಇಲಾಖಾ ವಿಚಾರಣೆಯನ್ನು ಕೈಬಿಡುವಂತೆ ಕೋರಿರುತ್ತಾರೆ.

ಅಧಿಕಾರಿಯ ಲಿಖಿತ ಹೇಳಿಕೆಯನ್ನು ಕೂಲಂಕಂಷವಾಗಿ ಪರಿಶೀಲಿಸಲಾಗಿ, ಅಧಿಕಾರಿಯ ವಿರುದ್ಧ ಆರೋಪಗಳನ್ನು ಕೈಬಿಡಲು ಸ-ಕಾರಣ/ಸಮಂಜಸ/ತೃಪ್ತಿಕರವಾಗಿಲ್ಲದೆ ಇರುವುದರಿಂದ, ಅಧಿಕಾರಿ ವಿರುದ್ಧದ ಆರೋಪಗಳ ಸತ್ಯಾಸತ್ಯೆಯನ್ನು ತಿಳಿಯಲು ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸಲು. ಸರ್ಕಾರವು ತೀರ್ಮಾನಿಸಿದೆ.

ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 151 ವಿಸೇಲಿ 2014 ಬೆಂಗಳೂರು**
**ದಿನಾಂಕ:17-08-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಮೇರೆಗೆ, ಈ ಹಿಂದೆ ಬೆಳಗಾವಿ ಜಿಲ್ಲಾ ಪಂಚಾಯತ್‌ನ ಯೋಜನಾ ನಿರ್ದೇಶಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಶ್ರೀ ಟಿ.ಎಸ್.ಲೋಕೇಶ್, (ಪ್ರಸ್ತುತ ಯೋಜನಾ ನಿರ್ದೇಶಕರು, ಜಿಲ್ಲಾ ಪಂಚಾಯತ್, ದಕ್ಷಿಣ ಕನ್ನಡ) ಇವರ ವಿರುದ್ಧ ದಿನಾಂಕ: 23.01.2015ರ ಕಾರಣ ಕೇಳುವ ನೋಟಿಸಿನೊಂದಿಗೆ ಜಾರಿಮಾಡಲಾದ ದೋಷಾರೋಪಣ ಪಟ್ಟಿಯಲ್ಲಿ ಮಾಡಿರುವ ಆರೋಪಗಳ ಸಂಬಂಧ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ), ನಿಯಮಾವಳಿಗಳು 1957ರ ನಿಯಮ 11 ಮತ್ತು 11(ಎ)ರ ಪ್ರಕಾರ ಇಲಾಖಾ ವಿಚಾರಣೆಯನ್ನು ನಡೆಸಲು, ಸದರಿ ನಿಯಮಾವಳಿಗಳ ನಿಯಮ -11 (2) ರನ್ವಯ ಶ್ರೀ ಪ್ರಭಾಕರ್ ಗಣಪತಿ ಕುಲಕರ್ಣಿ, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಇವರನ್ನು ವಿಚಾರಣಾಧಿಕಾರಿಯನ್ನಾಗಿ ಹಾಗೂ ಅದೇ ನಿಯಮಾವಳಿಗಳ ನಿಯಮ-11(5)(ಸಿ)ರ ಪ್ರಕಾರ ಸಹಾಯಕ ಕಾರ್ಯದರ್ಶಿ, (ಆಡಳಿತ) ಜಿಲ್ಲಾ ಪಂಚಾಯತ್, ಬೆಳಗಾವಿ, ಇವರನ್ನು ಮಂಡನಾಧಿಕಾರಿಯನ್ನಾಗಿ ಸರ್ಕಾರವು ನೇಮಿಸಿದೆ.

ವಿಚಾರಣಾಧಿಕಾರಿಯವರು ಈ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ), ನಿಯಮಾವಳಿಗಳು-1957ರ ನಿಯಮ-11ರಲ್ಲಿ ನಿಗಧಿಪಡಿಸಿರುವ ಕಾರ್ಯವಿಧಾನ ಅನುಸರಿಸಿ ವಿಚಾರಣೆ ಜರುಗಿಸಿ ವಿಚಾರಣಾ ವರದಿಯನ್ನು ಅವಶ್ಯಕ ದಾಖಲಾತಿಗಳೊಂದಿಗೆ, ಮೂರು ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

(ವಿ.ಹನುಮಂತಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ.
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ,

1) ಮಹಾಲೇಖಪಾಲರು. ಕರ್ನಾಟಕ ಬೆಂಗಳೂರು.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ. ಜಿಲ್ಲಾ ಪಂಚಾಯತ್. ಬೆಳಗಾವಿ/ದಕ್ಷಿಣ ಕನ್ನಡ.
3) ಶ್ರೀ ಪ್ರಭಾಕರ್ ಗಣಪತಿ ಕುಲಕರ್ಣಿ. ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು.
4) ಸಹಾಯಕ ಕಾರ್ಯದರ್ಶಿ.(ಆಡಳಿತ) ಜಿಲ್ಲಾ ಪಂಚಾಯತ್. ಬೆಳಗಾವಿ ಜಿಲ್ಲೆ.

ಪ್ರತಿ ಮಾಹಿತಿಗಾಗಿ:

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಆಪ್ತ ಕಾರ್ಯದರ್ಶಿ. ವಿಧಾನ ಸೌಧ. ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ (ಪಂ.ರಾಜ್)/ ಜಂಟಿ ಕಾರ್ಯದರ್ಶಿ (ಆಡಳಿತ) ರವರ ಆಪ್ತ ಶಾಖೆ. ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3) ಮೇಲ್ವಿಚಾರಕರು. ಗಣಕ ಕೋಶ. ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.